ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1622 (1934)
ಸದಸ್ಯರ ಹೆಸರು	:	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	23-03-2021
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
1.	ಬೀದರ್ ಜಿಲ್ಲೆಯ ನಗರಸಭೆ/ ಪುರಸಭೆಗಳಿಗೆ ಎಸ್.ಎಫ್.ಸಿ (ವಿಶೇಷ) ಯೋಜನೆಗಳ ಅಡಿಯಲ್ಲಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಹಾಗೂ ವೆಚ್ಚವಾದ ಅನುದಾನ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)	ಬೀದರ್ ಜಿಲ್ಲೆಯ ಬೀದರ್ ನಗರಸಭೆಗೆ ರೂ.500.00 ಲಕ್ಷಗಳ ಎಸ್‌ಎಫ್‌ಸಿ ವಿಶೇಷ ಅನುದಾನವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 03 ಎಸ್‌ಎಫ್‌ಸಿ 2019 ದಿ:09-01-2019ರಲ್ಲಿ ಮಂಜೂರು ಮಾಡಲಾಗಿರುತ್ತದೆ. ಹುಮ್ನಾಬಾದ್ ಪುರಸಭೆ, ಚಿಟಗುಪ್ಪ ಪುರಸಭೆ ಹಾಗೂ ಹಳ್ಳಿಖೇಡ ಪುರಸಭೆಗಳಿಗೆ ರೂ.400.00 ಲಕ್ಷಗಳ ಎಸ್‌ಎಫ್‌ಸಿ ವಿಶೇಷ ಅನುದಾನವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 03 ಎಸ್‌ಎಫ್‌ಸಿ 2019, ದಿ: 24-01-2019ರಲ್ಲಿ ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ. ಅದರಂತೆ, ಬೀದರ್ ನಗರಸಭೆ ವ್ಯಾಪ್ತಿಯಲ್ಲಿ 43 ಕಾಮಗಾರಿಗಳನ್ನು ಕೈಗೊಳ್ಳಲು ಕ್ರಿಯಾಯೋಜನೆ ಸಿದ್ಧಪಡಿಸಲಾಗಿ ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ ರವರ ಅನುಮೋದನೆಯನ್ನು ದಿ:07-03-2019ರಂದು ಪಡೆದು, ಅಂದಾಜು ಪಟ್ಟಿಗಳನ್ನು ಸಿದ್ಧಪಡಿಸಿ ಟೆಂಡರ್ ಕರೆಯುವ ಹಂತದಲ್ಲಿರುವಾಗ ಆರ್ಥಿಕ ಇಲಾಖೆಯ ನಿರ್ದೇಶನದನ್ವಯ ಹಾಗೂ ಇನ್ನು ಕಾಮಗಾರಿಗಳು ಆರಂಭವಾಗದಿದ್ದರಿಂದ, ಮಂಜೂರು ಮಾಡಲಾಗಿದ್ದ ವಿಶೇಷ ಅನುದಾನವನ್ನು ಸರ್ಕಾರದ ಪತ್ರ ಸಂಖ್ಯೆ: ನಅಇ 222 ಎಸ್‌ಎಫ್‌ಸಿ 2019, ದಿನಾಂಕ: 13-09-2019ರಲ್ಲಿ ತಡೆಹಿಡಿಯಲಾಗಿರುತ್ತದೆ.
2.	ಈ ಜಿಲ್ಲೆಯ ನಗರಸಭೆ/ಪುರಸಭೆಗಳಿಗೆ ಈ ಯೋಜನೆಯಡಿಯಲ್ಲಿ ನೀಡಲಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)	
3.	ಜಿಲ್ಲೆಯ ನಗರಸಭೆ/ ಪುರಸಭೆಗಳಲ್ಲಿ ಈ ಯೋಜನೆಯಡಿಯಲ್ಲಿ ಪೂರ್ಣಗೊಂಡ ಕಾಮಗಾರಿಗಳು ಯಾವುವು; ಪೂರ್ಣಗೊಳ್ಳದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು?	

ಕಡತ ಸಂಖ್ಯೆ:ನಅಇ 183 ಎಸ್.ಎಫ್.ಸಿ 2021

(ಎನ್. ನಾಗರಾಜ್, ಎಂ.ಟಿ.ಬಿ.)
ಪೌರಾಡಳಿತ ಹಾಗೂ ಸಕ್ಕರೆ ಸಚಿವರು